ಮೂಲ ದಾವಾ ಸಂಖ್ಯೆ. 23/2024　　　　　　　ಪಿ ಡಬ್ಲ್ಯೂ 1

(ದಿನಾಂಕ 18-03-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಕೆ ಜೆ ವಕೀಲರಿಂದಃ-

ನಾನು ನನ್ನ ಮುಖ್ಯ ವಿಚಾರಣಾ ಸಾಕ್ಷ್ಯದ ಕುರಿತು ನ್ಯಾಯಾಲಯದ ಮುಂದೆ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಇರುತ್ತದೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ಸರ್ವೆ ನಂ.19 ಎಫ್ ನ 6 ಕೈಬರಹ ಪಹಣಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 6 ಎಂದು, ಸರ್ವೆ ನಂ. 19 ಎಫ್ ನ 18 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-7 ರಿಂದ 24 ಎಂದು, ಸರ್ವೆ ನಂ. 19/6 ರ ಪಹಣಿ ಹಾಜರುಪಡಿಸಿದ್ದು ಅದನ್ನು ನಿಪಿ-25 ಎಂದು, ಆಕಾರ ಬಂದ್ ನ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-26 ಎಂದು, ನಮೂನೆ ನಂ.10 ರ ಯಥಾ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-27 ಎಂದು, ನಕಾಶೆಯ ಯಥಾ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-28 ಎಂದು, ದಿಃ 22-08-2023 ರಂದು ತಹಶೀಲ್ದಾರ್ ಹೆಚ್ ಬಿ ಹಳ್ಳಿ ಇವರು ನೀಡಿರುವಂತಹ ಹಿಂಬರಹ ಹಾಜರುಪಡಿಸಿದ್ದು ಅದನ್ನು ನಿಪಿ-29 ಎಂದು, ಇ ಸಿ ಹಾಜರುಪಡಿಸಿದ್ದು ಅದನ್ನು ನಿಪಿ-30 ಎಂದು, ಪ್ರಪತ್ರ 21 ರ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-31 ಎಂದು, ಮ್ಯುಟೇಶನ್ ನಂ. 77 ರ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-32 ಎಂದು, ಎಂ ನಂ.16 ರ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-33 ಎಂದು, ಎಂ ನಂ.77/1984-85 ರ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-34 ಎಂದು, ಎಂ ನಂ.17/1995-96 ರ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-35 ಎಂದು, ಎಂ ಆರ್ ಹೆಚ್ 65, ಎಂ ಆರ್ ಪಿ-41 ರ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-36 ಮತ್ತು 37 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ